All India Radio: Bangalore
National Bulletin In Kannada
14.06.2025: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು :**

1. ಬೋಯಿಂಗ್ ವಿಮಾನಗಳಲ್ಲಿ ಹೆಚ್ಚುವರಿ ಸುರಕ್ಷತಾ ತಪಾಸಣೆ ನಡೆಸುವಂತೆ ನಾಗರಿಕ ವಿಮಾನಯಾನ ನಿರ್ದೇಶನಾಲಯ ಏರ್ ಇಂಡಿಯಾಕ್ಕೆ ತಾಕೀತು
2. ನವದೆಹಲಿಯಲ್ಲಿಂದು ಆಯುಷ್ ಸಚಿವಾಲಯದಿಂದ ಉನ್ನತ ಮಟ್ಟದ ಜಾಗತಿಕ ಶೃಂಗಸಭೆ 'ಯೋಗ ಸಂಪರ್ಕ' ಆಯೋಜನೆ
3. ಮುಂಬರುವ ತಿಂಗಳುಗಳಿಗೆ ದೇಶ ಸಾಕಷ್ಟು ಇಂಧನ ಸರಬರಾಜು ಹೊಂದಿದೆ - ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ
4. ಐಎಸ್‌ಎಸ್‌ಎಫ್ ವಿಶ್ವಕಪ್ ಮಹಿಳೆಯರ ಶೂಟಿಂಗ್; ಭಾರತದ ಸುರುಚಿ ಸಿಂಗ್‌ಗೆ ಚಿನ್ನದ ಪದಕ

**********

ಅಹಮದಾಬಾದ್‌ನಲ್ಲಿ ಸಂಭವಿಸಿದ ವಿಮಾನ ಅಪಘಾತದ ನಂತರ, ಮುನ್ನೆಚ್ಚರಿಕೆ ಕ್ರಮವಾಗಿ ಜೆನ್ಕ್ಸ್ ಎಂಜಿನ್‌ಗಳನ್ನು ಹೊಂದಿದ ಬೋಯಿಂಗ್ ೭೮೭-೮/೯ ವಿಮಾನಗಳಲ್ಲಿ ಹೆಚ್ಚುವರಿ ಸುರಕ್ಷತಾ ತಪಾಸಣೆಗಳನ್ನು ನಡೆಸುವಂತೆ ನಾಗರಿಕ ವಿಮಾನಯಾನ ನಿರ್ದೇಶನಾಲಯ ಏರ್ ಇಂಡಿಯಾ ಸಂಸ್ಥೆಗೆ ನಿರ್ದೇಶನ ನೀಡಿದೆ. ಡಿಜಿಸಿಎ ತನ್ನ ಸಂಬಂಧಿತ ಪ್ರಾದೇಶಿಕ ಕಚೇರಿಗಳ ಸಮನ್ವಯದೊಂದಿಗೆ ತಕ್ಷಣದಿಂದ ಜಾರಿಗೆ ಬರುವಂತೆ ತಪಾಸಣೆ ನಡೆಸಬೇಕು ಎಂದು ಹೇಳಿದೆ.  ಈ ನಡುವೆ, ಅಹಮದಾಬಾದ್‌ನಲ್ಲಿ ನಡೆದ ವಿಮಾನ ಅಪಘಾತದ ತನಿಖೆ ಮುಂದುವರೆದಿದ್ದು, ವಿಧಿವಿಜ್ಞಾನ ತಜ್ಞರು ನಿನ್ನೆ ಅಪಘಾತ ಸ್ಥಳಕ್ಕೆ ಭೇಟಿ ನೀಡಿ ವಿವರವಾದ ಪರೀಕ್ಷೆ ನಡೆಸಿದ್ದಾರೆ.

**********

ಯೋಗಕ್ಕಾಗಿ 'ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' ಎಂಬ ಉನ್ನತ ಮಟ್ಟದ ಜಾಗತಿಕ ಶೃಂಗಸಭೆಯಾದ- 'ಯೋಗ ಸಂಪರ್ಕ'ವನ್ನು ಆಯುಷ್ ಸಚಿವಾಲಯ ನವದೆಹಲಿಯಲ್ಲಿ ಇಂದು ಆಯೋಜಿಸಲಿದೆ.

ಈ ತಿಂಗಳ ೨೧ ರಂದು ನಡೆಯಲಿರುವ ೧೧ ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಮುಖ ಪೂರ್ವಭಾವಿ ಕಾರ್ಯಕ್ರಮವಾಗಿ ಈ ಶೃಂಗಸಭೆಯನ್ನು ಆಯೋಜಿಸಲಾಗುತ್ತಿದೆ.ಇಂದಿನ ಕಾರ್ಯಕ್ರಮದಲ್ಲಿ ಒಂದು ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದಾರೆ.  ಜೊತೆಗೆ ಪ್ರಪಂಚದ ವಿವಿಧ ಪ್ರಮುಖ ಅಂತಾರಾಷ್ಟ್ರೀಯ ಯೋಗ ಸಂಸ್ಥೆಗಳು ವರ್ಚುವಲ್ ಮೂಲಕ ಭಾಗಿಯಾಗಲಿವೆ.ಬಹ್ರೇನ್, ಯುನೈಟೆಡ್ ಸ್ಟೇಟ್ಸ್, ಯುನೈಟೆಡ್ ಕಿಂಗ್‌ಡಮ್ ಮತ್ತು ದಕ್ಷಿಣ ಕೊರಿಯಾ ಸೇರಿದಂತೆ ಹಲವು ದೇಶಗಳ ತಜ್ಞರು ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ದಶಕದಲ್ಲಿ ಅಂತಾರಾಷ್ಟ್ರೀಯ ಯೋಗ ದಿನದ, ಯೋಗ ಪ್ರಭಾವ ವರದಿಯನ್ನು ಶೃಂಗಸಭೆಯಲ್ಲಿ ಬಿಡುಗಡೆ ಮಾಡಲಾಗುತ್ತದೆ. ಯೋಗದ ದಶಕದ ಪರಿಣಾಮ- ಇ-ಪುಸ್ತಕ ಮತ್ತು ಯೋಗ ಸಂಶೋಧನೆಯ ವಿಶ್ಲೇಷಣೆಯ ವರದಿಯನ್ನೂ ಇದೇ ಸಂದರ್ಭದಲ್ಲಿ ಅನಾವರಣಗೊಳಿಸಲಾಗುವುದು.

**********

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೇತನ್ಯಾಹು ಅವರೊಂದಿಗೆ ನಿನ್ನೆ ದೂರವಾಣಿ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು, ಪಶ್ಚಿಮ ಏಷ್ಯಾದಲ್ಲಿನ ವಿಕಸನಗೊಳ್ಳುತ್ತಿರುವ ಪರಿಸ್ಥಿತಿಯ ಬಗ್ಗೆ ವಿವರಿಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ಕುರಿತು ಮಾಹಿತಿ ನೀಡಿರುವ ಪ್ರಧಾನಿ ಭಾರತದ ಕಳವಳಗಳನ್ನು ವ್ಯಕ್ತಪಡಿಸಿ ಈ ಪ್ರದೇಶದ ಶಾಂತಿ ಮತ್ತು ಸ್ಥಿರತೆ ಶೀಘ್ರವಾಗಿ ಸುಧಾರಿಸುವ ಅಗತ್ಯದ ಬಗ್ಗೆ ಹೇಳಿದ್ದಾರೆ.

**********

ಇರಾನ್ ನಿನ್ನೆ ಇಸ್ರೇಲ್ ವಿರುದ್ಧ ಪ್ರತೀಕಾರದ ದಾಳಿಯನ್ನು ಪ್ರಾರಂಭಿಸಿದೆ. ಇಸ್ರೇಲ್ ನಗರಗಳ ಮೇಲೆ ನೂರಾರು ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಹಾರಿಸಿರುವ ಇರಾನ್, ಇದನ್ನು ಟೆಹ್ರಾನ್ "ಆಪರೇಷನ್ ಸೀರಿಯಸ್ ಪನಿಶ್‌ಮೆಂಟ್" ಎಂದು ಕರೆದಿದೆ. ಈ ಬೃಹತ್ ದಾಳಿಯಿಂದಾಗಿ ಇಸ್ರೇಲ್‌ನಾದ್ಯಂತ ವಾಯುದಾಳಿ ಸೈರನ್‌ಗಳು ಮೊಳಗಿದವು. ಸ್ಫೋಟಗಳು ಟೆಲ್ ಅವೀವ್ ಮತ್ತು ಜೆರುಸಲೆಮ್ ಅನ್ನು ನಡುಗಿಸಿದಾಗ ಲಕ್ಷಾಂತರ ನಾಗರಿಕರು ತೊಂದರೆಗೆ ಒಳಗಾದರು.

**********

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಮಾರ್ಸಿಲ್ಲೆಯಲ್ಲಿ ನಿನ್ನೆ ಫ್ರೆಂಚ್ ವಿದೇಶಾಂಗ ಸಚಿವ ಜೀನ್-ನೋಯೆಲ್ ಬ್ಯಾರಟ್ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ. ಭಯೋತ್ಪಾದನೆಯನ್ನು ಫ್ರಾನ್ಸ್ ತೀವ್ರವಾಗಿ ಖಂಡಿಸಿದ್ದನ್ನು ಮತ್ತು ಭಾರತ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕನ್ನು ಡಾ. ಜೈಶಂಕರ್ ಸ್ವಾಗತಿಸಿದರು. ವ್ಯಾಪಾರ, ರಕ್ಷಣೆ, ಶುದ್ಧ ಇಂಧನ, ಐಎಂಇಸಿ, ಸಂಸ್ಕೃತಿ ಮತ್ತು ಸಂಬಂಧಗಳು ಸೇರಿದಂತೆ ದ್ವಿಪಕ್ಷೀಯ ಸಹಕಾರದ ಕುರಿತು ಇಬ್ಬರೂ ಸಚಿವರು ಮಹತ್ವದ ಚರ್ಚೆಗಳನ್ನು ನಡೆಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್, ಭಾರತ-ಫ್ರಾನ್ಸ್ ನಾವೀನ್ಯತೆ ವರ್ಷ ೨೦೨೬ಕ್ಕೆ ಮುಂಚಿತವಾಗಿ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಸೈಬರ್ ಮತ್ತು ಬಾಹ್ಯಾಕಾಶ ಕ್ಷೇತ್ರಗಳಲ್ಲಿ ಹೊಸ ಅವಕಾಶಗಳನ್ನು ಅನ್ವೇಷಿಸಿದ್ದೇವೆ ಎಂದು ತಿಳಿಸಿದ್ದಾರೆ.

**********

ಮಧ್ಯಪ್ರದೇಶದ ಸತ್ಪುರದಲ್ಲಿರುವ ಗಿರಿಧಾಮವಾದ ಪಚ್ಮರ್ಹಿಯಲ್ಲಿ ಇಂದಿನಿಂದ ೧೬ ರವರೆಗೆ ರಾಜ್ಯದ ಬಿಜೆಪಿ ಶಾಸಕರು ಮತ್ತು ಸಚಿವರಿಗೆ ಉನ್ನತ ಮಟ್ಟದ ಮೂರು ದಿನಗಳ ತರಬೇತಿ ಶಿಬಿರ ನಡೆಯಲಿದೆ. ರಾಜಕೀಯ ಕಾರ್ಯತಂತ್ರವನ್ನು ತೀಕ್ಷ್ಣಗೊಳಿಸಲು ಮತ್ತು ಸೈದ್ಧಾಂತಿಕ ನೆಲೆಯನ್ನು ಬಲಪಡಿಸಲು ವಿನ್ಯಾಸಗೊಳಿಸಲಾದ ಈ ಕಾರ್ಯಕ್ರಮ ಎಲ್ಲಾ ಸಂಸದರು, ಶಾಸಕರು ಮತ್ತು ರಾಜ್ಯ ಸಂಪುಟ ಸದಸ್ಯರು ಸೇರಿದಂತೆ ೨೦೧ ಚುನಾಯಿತ ಪ್ರತಿನಿಧಿಗಳನ್ನು ಒಟ್ಟುಗೂಡಿಸುತ್ತದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಮಧ್ಯಾಹ್ನ ೩ ಗಂಟೆಗೆ ಶಿಬಿರವನ್ನು ಉದ್ಘಾಟಿಸಲಿದ್ದಾರೆ, ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇದೇ ೧೬ ರಂದು ಸಮಾರೋಪ ಭಾಷಣ ಮಾಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಮೋಹನ್ ಯಾದವ್ ಸೇರಿದಂತೆ ವಿಶೇಷ ಆಹ್ವಾನಿತರು ಅಧಿವೇಶನಗಳಲ್ಲಿ ಭಾಗವಹಿಸಲಿದ್ದಾರೆ.

**********

ಮುಂಬರುವ ತಿಂಗಳುಗಳಿಗೆ ದೇಶ ಸಾಕಷ್ಟು ಇಂಧನ ಸರಬರಾಜುಗಳನ್ನು ಹೊಂದಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ನಿನ್ನೆ ಪೆಟ್ರೋಲಿಯಂ ಕಾರ್ಯದರ್ಶಿ ಮತ್ತು ಭಾರತೀಯ ಇಂಧನ ಸಾರ್ವಜನಿಕ ವಲಯದ ಉದ್ಯಮಗಳ ಮುಖ್ಯಸ್ಥರೊಂದಿಗೆ ಪರಿಶೀಲನಾ ಸಭೆ ನಡೆಸಿದ ನಂತರ ಸಚಿವರು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ಮಾಹಿತಿ ನೀಡಿದ್ದಾರೆ. ಇರಾನ್ ಮೇಲೆ ಇಸ್ರೇಲ್ ದಾಳಿಯ ನಂತರ ನಿನ್ನೆ ಅಂತಾರಾಷ್ಟ್ರೀಯ ತೈಲ ಬೆಲೆಗಳು ತೀವ್ರವಾಗಿ ಏರಿಕೆಯಾದ ಕಾರಣ ತೈಲ ಪೂರೈಕೆ ನವೀಕರಣ ಮಹತ್ವದ್ದಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ "ಕ್ರಿಯಾತ್ಮಕ ನಾಯಕತ್ವ"ದಲ್ಲಿ ಇಂಧನ ಲಭ್ಯತೆ, ಕೈಗೆಟುಕುವಿಕೆ ಮತ್ತು ಸುಸ್ಥಿರತೆಯ ಸ್ಥಿತಿಯನ್ನು ಯಶಸ್ವಿಯಾಗಿ ನಿರ್ವಹಿಸುವ ಮೂಲಕ ಭಾರತದ ಇಂಧನ ಕಾರ್ಯತಂತ್ರವನ್ನು ರೂಪಿಸಲಾಗಿದೆ ಎಂದು ಅವರು ಹೇಳಿದ್ದಾರೆ.

**********

ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ೧೬ನೇ ಹಣಕಾಸು ಆಯೋಗದ ಅಧ್ಯಕ್ಷ ಡಾ. ಅರವಿಂದ್ ಪನಗಾರಿಯಾ ಮತ್ತು ಆಯೋಗದ ಸದಸ್ಯರನ್ನು ನಿನ್ನೆ ದೆಹಲಿಯಲ್ಲಿ ಭೇಟಿ ಮಾಡಿ, ತೆರಿಗೆ ವಿಕೇಂದ್ರೀಕರಣ ಮತ್ತು ಕೇಂದ್ರದಿಂದ ರಾಜ್ಯಕ್ಕೆ ವರ್ಗಾವಣೆಗೆ ಸಂಬಂಧಿಸಿದಂತೆ ನಿರೀಕ್ಷೆಗಳು ಮತ್ತು ಪ್ರಸ್ತಾವನೆಗಳನ್ನು ಮಂಡಿಸಿದರು.

ಸಭೆಯಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ಮುಖ್ಯ ಕಾರ್ಯದರ್ಶಿ, ಮುಖ್ಯಮಂತ್ರಿ ಕಚೇರಿ ಮತ್ತು ಹಣಕಾಸು ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ಬೆಳವಣಿಗೆ ಮತ್ತು ಸಮಾನತೆ, ಸಹಬಾಳ್ವೆ ನಡೆಸಬೇಕು ಹಾಗೂ ನ್ಯಾಯಯುತ ಹಣಕಾಸು ವಿಕೇಂದ್ರೀಕರಣದಿಂದ ಬೆಂಬಲಿತವಾದ, ಕರ್ನಾಟಕ, ಸದೃಢ ರಾಷ್ಟ್ರನಿರ್ಮಾಣಕ್ಕೆ ಅತ್ಯಗತ್ಯ ಎಂದು ಮುಖ್ಯಮಂತ್ರಿ ಒತ್ತಿ ಹೇಳಿದರು. “ಕರ್ನಾಟಕದ ಆರ್ಥಿಕ ಬಲವು, ರಾಷ್ಟ್ರೀಯ ಬೆಳವಣಿಗೆಗೆ ಇಂಧನವಾಗಿದೆ. ಅಧಿಕಾರ ವಿಕೇಂದ್ರೀಕರಣಕ್ಕೆ ಸಮತೋಲಿತ, ಭವಿಷ್ಯ-ದೃಷ್ಟಿಕೋನ ವಿಧಾನವನ್ನು ಅಳವಡಿಸಿಕೊಳ್ಳುವಂತೆ ಆಯೋಗವನ್ನು ಅವರು ಒತ್ತಾಯಿಸಿದರು. ಆಯೋಗವನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ, ಭಾರತದ ಆರ್ಥಿಕ ಬೆಳವಣಿಗೆಯಲ್ಲಿ ಕರ್ನಾಟಕದ ಪ್ರಮುಖ ಪಾತ್ರವನ್ನು ಒತ್ತಿ ಹೇಳಿದರು. ಕರ್ನಾಟಕ, ರಾಷ್ಟ್ರೀಯ ಜಿಡಿಪಿಯ ಸುಮಾರು ಶೇ. ೮.೭ ರಷ್ಟು ಕೊಡುಗೆ ನೀಡುತ್ತದೆ ಅಲ್ಲದೇ, ಜಿಎಸ್ಟಿ ಸಂಗ್ರಹದಲ್ಲಿ ದೇಶದಲ್ಲಿ ಎರಡನೇ ಸ್ಥಾನದಲ್ಲಿದೆ ಎಂದರು. ಕರ್ನಾಟಕ, ಕೇಂದ್ರ ತೆರಿಗೆಗಳಿಗೆ ನೀಡುವ ಪ್ರತಿ ರೂಪಾಯಿಗೆ, ಕೇವಲ ೧೫ ಪೈಸೆಯನ್ನು ಮಾತ್ರ ಪಡೆಯುತ್ತದೆ. ೧೫ ನೇ ಹಣಕಾಸು ಆಯೋಗದ ಅಡಿಯಲ್ಲಿ ಕರ್ನಾಟಕದ ಪಾಲನ್ನು - ಶೇ. ೪.೭೧೩ ರಿಂದ ಶೇ. ೩.೬೪೭ ಕ್ಕೆ ಇಳಿಸುವುದರಿಂದ, ಒಟ್ಟು ೮೦ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ನಷ್ಟವಾಗಿದೆ ಎಂದು ಅವರು ಗಮನಸೆಳೆದರು.ಕರ್ನಾಟಕ ತನ್ನ ಮುಖ್ಯ ಜ್ಞಾಪಕ ಪತ್ರದಲ್ಲಿ, ರಾಜ್ಯಗಳಿಗೆ ಹಂಚಿಕೆಯಾಗುವ ತೆರಿಗೆಗಳ ಪಾಲನ್ನು ಕನಿಷ್ಠ ಶೇಕಡ ೫೦ ಕ್ಕೆ ಹೆಚ್ಚಿಸಬೇಕು ಮತ್ತು ಸೆಸ್‌ಗಳು ಮತ್ತು ಸರ್‌ಚಾರ್ಜ್‌ಗಳನ್ನು ಶೇಕಡ ೫ ಕ್ಕೆ ಮಿತಿಗೊಳಿಸಬೇಕು ಎಂದು ಪ್ರಸ್ತಾಪಿಸಿದೆ. ಕರ್ನಾಟಕದ

ಆರ್ಥಿಕತೆಯಲ್ಲಿ ಬೆಂಗಳೂರಿನ ಪ್ರಮುಖ ಪಾತ್ರವನ್ನು ಪರಿಗಣಿಸಿ, ಬೆಂಗಳೂರಿನ ಮೂಲಸೌಕರ್ಯವನ್ನು ಬಲಪಡಿಸಲು ೧.೧೫ ಲಕ್ಷ ಕೋಟಿ ರೂಪಾಯಿ ಹೂಡಿಕೆಗೆ ಬೆಂಬಲವನ್ನು ಮುಖ್ಯಮಂತ್ರಿ ಕೋರಿದರು.

**********

ಕ್ರಿಪ್ಟೋ ಕರೆನ್ಸಿಯಲ್ಲಿ ಹೂಡಿಕೆ ಮಾಡುವ ಮೂಲಕ ಹೆಚ್ಚಿನ ವ್ಯಕ್ತಿಗಳು ತೆರಿಗೆ ವಂಚನೆ ಮತ್ತು ಲೆಕ್ಕವಿಲ್ಲದ ಆದಾಯದ ಅಕ್ರಮ ವರ್ಗಾವಣೆ ಕುರಿತು ಕೇಂದ್ರ ನೇರ ತೆರಿಗೆ ಮಂಡಳಿ - ಸಿಬಿಡಿಟಿ ತನಿಖೆ ನಡೆಸುತ್ತಿದೆ. ವರ್ಚುವಲ್ ಡಿಜಿಟಲ್ ಆಸ್ತಿ ವಹಿವಾಟುಗಳಲ್ಲಿ ತೊಡಗಿರುವ ಮತ್ತು ಆದಾಯ ತೆರಿಗೆ ಕಾಯ್ದೆ - ೧೯೬೧ ಅನ್ನು ಅನುಸರಿಸಲು ವಿಫಲರಾದ ಘಟಕಗಳು ಮತ್ತು ವ್ಯಕ್ತಿಗಳನ್ನು ಪರಿಶೀಲನೆಗಾಗಿ ಗುರುತಿಸಲಾಗಿದೆ ಎಂದು ಸಿಬಿಡಿಟಿ ಮೂಲಗಳು ತಿಳಿಸಿವೆ. ಗಮನಾರ್ಹ ಸಂಖ್ಯೆಯ ವ್ಯಕ್ತಿಗಳು ಆದಾಯ ತೆರಿಗೆಗೆ ಸಂಬಂಧಿಸಿ ಆಸ್ತಿ ವಹಿವಾಟುಗಳನ್ನು ಸಲ್ಲಿಸದೆ, ಕಡಿಮೆ ದರದಲ್ಲಿ ಗಳಿಸಿದ ಆದಾಯದ ಮೇಲೆ ತೆರಿಗೆಯನ್ನು ನೀಡುವ ಮೂಲಕ ಆದಾಯ ತೆರಿಗೆ ಕಾಯ್ದೆಯ ನಿಬಂಧನೆಗಳನ್ನು ಉಲ್ಲಂಘಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

**********

ರಾಜಸ್ಥಾನದಲ್ಲಿ ಮುಂದಿನ ಎರಡು ಮೂರು ದಿನಗಳವರೆಗೆ ಬಿರುಗಾಳಿಯೊಂದಿಗೆ, ತೀವ್ರ ಶಾಖದ ಅಲೆಯ ಪರಿಸ್ಥಿತಿ ಮುಂದುವರಿಯಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಜಮ್ಮು-ಕಾಶ್ಮೀರ, ಹರಿಯಾಣ, ಚಂಡೀಗಢ, ದೆಹಲಿ, ಮಧ್ಯಪ್ರದೇಶ, ಪಂಜಾಬ್ ಮತ್ತು ಉತ್ತರ ಪ್ರದೇಶಗಳ ವಿವಿಧ ಸ್ಥಳಗಳಲ್ಲಿ ಇಂದು ಶಾಖದ ಅಲೆಯ ಪರಿಸ್ಥಿತಿ ಮುಂದುವರಿಯಲಿದೆ ಎಂದು ಇಲಾಖೆ ತಿಳಿಸಿದೆ.

**********

ಜರ್ಮನಿಯ ಮ್ಯೂನಿಚ್‌ನಲ್ಲಿ ನಡೆದ ಐಎಸ್‌ಎಸ್‌ಎಫ್ ವಿಶ್ವಕಪ್‌ನ ಮಹಿಳೆಯರ ೧೦ ಮೀಟರ್ ಏರ್ ಪಿಸ್ತೂಲ್ ಶೂಟಿಂಗ್ ಫೈನಲ್‌ನಲ್ಲಿ, ಭಾರತದ ಸುರುಚಿ ಸಿಂಗ್ ಚಿನ್ನದ ಪದಕ ಗೆದ್ದಿದ್ದಾರೆ. ಅವರು ನಿನ್ನೆ ಫ್ರಾನ್ಸ್‌ನ ಕ್ಯಾಮಿಲ್ಲೆ ಜೆಡ್ರೆಜೆವ್ಸ್ಕಿ ಅವರನ್ನು ೦.೨ ಅಂಕಗಳ ಅಂತರದಿಂದ ಸೋಲಿಸಿ ಒಟ್ಟು ೨೪೧.೯ ಅಂಕಗಳನ್ನು ಗಳಿಸಿದರು. ಚೀನಾದ ಯಾವೊ ಕ್ವಿಯಾನ್ಕ್ಸನ್ ೨೨೧.೭ ಅಂಕಗಳೊಂದಿಗೆ ಕಂಚಿನ ಪದಕ ಪಡೆದರು. ೧೦ ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಸುರುಚಿ ಅವರ ಸತತ ೩ ನೇ ವೈಯಕ್ತಿಕ ಚಿನ್ನದ ಪದಕ ಇದಾಗಿದೆ. ಸ್ಪರ್ಧೆಯಲ್ಲಿ ಭಾರತ ೩ ಪದಕಗಳನ್ನು ಗಳಿಸಿದ್ದು, ಅಂಕಪಟ್ಟಿಯಲ್ಲಿ ನಾಲ್ಕನೇ ಸ್ಥಾನದಲ್ಲಿದೆ.

*****END*****